# ಕರ್ನಾಟಕ ಸರ್ಕಾರ

## ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು–560001

**ಸಂಖ್ಯೆ: ಸಹನಿಶಾಶಿ.ಆಶಾ/ಕ.ವ.ಕು.ಜಾ.ಸು/32544/ಇ.ಎ.2020** **ದಿನಾಂಕ: 24–4–2020**

**–: ಸುತ್ತೋಲೆ :–**

ವಿಷಯ : ಖಾಸಗಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಂದ ಶುಲ್ಕ ಪಡೆಯುವ ಬಗ್ಗೆ.
ಉಲ್ಲೇಖ : (1) ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ : 17–4–2020
(2) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಟಿಪ್ಪಣಿ ದಿನಾಂಕ : 23–4–2020.

* * *

ಕೊರೋನಾ ವೈರಸ್ ಹರಡುತ್ತಿರುವ ಹಿನ್ನೆಲೆಯಲ್ಲಿ ದೇಶದಾದ್ಯಂತ ಲಾಕ್‌ಡೌನ್ ಜಾರಿಯಲ್ಲಿದ್ದು, ಈ ಸಮಯದಲ್ಲಿ ಶುಲ್ಕವನ್ನು ವಿದ್ಯಾರ್ಥಿಗಳ ಪೋಷಕರಿಂದ ವಸೂಲಾತಿ ಮಾಡುವುದನ್ನು ಸರ್ಕಾರದ ಮುಂದಿನ ಆದೇಶದವರೆಗೆ ಮುಂದೂಡುವಂತೆ ಈ ಕಛೇರಿಯ ಉಲ್ಲೇಖ (1)ರ ಸುತ್ತೋಲೆಯಲ್ಲಿ ಸೂಚಿಸಲಾಗಿತ್ತು.

ಆದರೆ, ಖಾಸಗಿ ಶಾಲೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಶಿಕ್ಷಕರಿಗೆ ಮತ್ತು ಬೋಧಕೇತರ ಸಿಬ್ಬಂದಿಗಳಿಗೆ ವೇತನ ಪಾವತಿಸಲು ಸಹ ತೊಂದರೆಯುಂಟಾಗಿದ್ದು, ಮಾನವೀಯ ನೆಲೆಗಟ್ಟಿನಲ್ಲಿ ಅನುಕೂಲ ಮಾಡಿಕೊಡಲು ಹಲವು ಖಾಸಗಿ ಶಾಲಾ ಆಡಳಿತ ಮಂಡಳಿಗಳು ಕೋರಿರುವ ಹಿನ್ನೆಲೆಯಲ್ಲಿ, ಶುಲ್ಕ ಪಾವತಿಗೆ ಸಂಬಂಧಿಸಿದಂತೆ ಉಲ್ಲೇಖ (1)ರ ಸುತ್ತೋಲೆಯನ್ನು ಭಾಗಶಃ ಮಾರ್ಪಡಿಸುವಂತೆ ಉಲ್ಲೇಖ (2) ರ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಸೂಚಿಸಿರುತ್ತಾರೆ. ಆದುದರಿಂದ, ರಾಜ್ಯದ ಎಲ್ಲಾ ಶಾಲೆಗಳಲ್ಲಿ ಶುಲ್ಕ ಪಾವತಿಗೆ ಸಂಬಂಧಿಸಿದಂತೆ ಈ ಕೆಳಕಂಡ ಕ್ರಮಗಳನ್ನು ತೆಗೆದುಕೊಳ್ಳಲು ಸೂಚಿಸಿದೆ :

1. ತಮ್ಮ ಮಕ್ಕಳ ಬೋಧನಾ ಶುಲ್ಕವನ್ನು ಪಾವತಿಸಲು ಆರ್ಥಿಕವಾಗಿ ಸಮರ್ಥರಾದ, ಬಾಕಿ ಪಾವತಿಸಲು ಶಕ್ತರಾಗಿರುವ ಹಾಗೂ ಶುಲ್ಕವನ್ನು ಸ್ವಯಂಪ್ರೇರಿತರಾಗಿ ಭರಿಸಲು ಮುಂದಾಗುವ ಪೋಷಕರುಗಳಿಂದ ಮಾತ್ರ ಶಿಕ್ಷಣ ಕಾಯ್ದೆಯ ಅವಕಾಶಗಳಡಿಯಲ್ಲಿ ಶುಲ್ಕ ವಸೂಲಾತಿಗೆ ಅವಕಾಶ ನೀಡಿದೆ.
2. ತಮ್ಮ ಮಕ್ಕಳ ಶುಲ್ಕವನ್ನು ಕಟ್ಟಲು ಸದ್ಯದ ಪರಿಸ್ಥಿತಿಯಲ್ಲಿ ಅಸಹಾಯಕರಾದ ಹಾಗೂ ಈ ಸಮಯದಲ್ಲಿ ಶುಲ್ಕವನ್ನು ಪಾವತಿಸಲು ಸಾಧ್ಯವಿಲ್ಲವೆಂದು ನಿರಾಕರಿಸುವ ಪೋಷಕರುಗಳಿಂದ ಮುಂದಿನ ಆದೇಶದವರೆಗೆ ಯಾವುದೇ ಕಾರಣಕ್ಕೂ ಶುಲ್ಕ ವಸೂಲು ಮಾಡುವಂತಿಲ್ಲ. ಒಂದು ವೇಳೆ ಶುಲ್ಕ ಕಟ್ಟಲು ಸಾಧ್ಯವಾಗದ ಪೋಷಕರ ಮೇಲೆ ಒತ್ತಡ ಹೇರುವುದು ಹಾಗೂ ಶುಲ್ಕ ಪಾವತಿಸದ ಕಾರಣದಿಂದ ಸಂಬಂಧಿಸಿದ ವಿದ್ಯಾರ್ಥಿಯ ದಾಖಲಾತಿಯನ್ನು ನಿರಾಕರಿಸಿರುವ ಅಥವಾ ಶಾಲೆಯಿಂದ ಹೊರ ಹಾಕಿರುವ ಕುರಿತು ಯಾವುದೇ ದೂರುಗಳು ಬಂದಲ್ಲಿ ಅಂತಹ ಶಾಲೆಗಳ ಮೇಲೆ ನಿರ್ದಾಕ್ಷಿಣ್ಯವಾಗಿ ಶಿಕ್ಷಣ ಕಾಯ್ದೆಯಡಿಯಲ್ಲಿ ಸಂಬಂಧಿಸಿದ ಉಪನಿರ್ದೇಶಕರುಗಳು ಶಿಸ್ತಿನ ಕ್ರಮ ಕೈಗೊಳ್ಳಲು ಸೂಚಿಸಿದೆ.
3. ಪೋಷಕರು ನೀಡುವ ಹಣವನ್ನು ಖಾಸಗಿ ಶಾಲೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಶಿಕ್ಷಕರ ಮತ್ತು ಸಿಬ್ಬಂದಿ ವರ್ಗದವರ ವೇತನಕ್ಕೆ ಬಳಸಿಕೊಳ್ಳಲು ಪ್ರಥಮ ಆದ್ಯತೆಯನ್ನು ನೀಡುವುದು.

4. ಶುಲ್ಕವನ್ನು ಚೆಕ್ / RTGS / NEFT / ಆನ್‌ಲೈನ್ ಮೂಲಕವೇ ಕಡ್ಡಾಯವಾಗಿ ಪಡೆಯುವುದು. ಯಾವುದೇ ಕಾರಣಕ್ಕೂ ಲಾಕ್‌ಡೌನ್ ಅವಧಿಯಲ್ಲಿ ಪೋಷಕರಾಗಲೀ, ವಿದ್ಯಾರ್ಥಿಗಳಾಗಲೀ ಶಾಲೆಯ ಆವರಣಕ್ಕೆ ಬಾರದಂತೆ ನೋಡಿಕೊಳ್ಳುವುದು.
5. ಆಡಳಿತ ಮಂಡಳಿಯವರು ಶಾಲಾ ಶುಲ್ಕವನ್ನು ಪಾವತಿಸಲು ಪೋಷಕರಿಗೆ ಇ-ಮೇಲ್, ಎಸ್.ಎಂ.ಎಸ್. ಅಥವಾ ವಾಟ್ಸ್‌ಆಪ್ ಮೂಲಕ ಸೂಚನೆ ನೀಡುವ ಸಮಯದಲ್ಲಿ "ಶುಲ್ಕ ಪಾವತಿಸಲು ಶಕ್ತರಿರುವ ಹಾಗೂ ಸ್ವ-ಇಚ್ಛೆಯಿಂದ ಪಾವತಿಸಲು ಇಚ್ಛಿಸುವ ಪೋಷಕರುಗಳು ಮಾತ್ರ ಪಾವತಿಸಬಹುದು ಹಾಗೂ ಸದ್ಯದ ಪರಿಸ್ಥಿತಿಯಲ್ಲಿ ಶುಲ್ಕ ಪಾವತಿಸಲು ಸಾಧ್ಯವಿಲ್ಲದೇ ಇರುವ ಪೋಷಕರುಗಳು ಸದ್ಯಕ್ಕೆ ಶುಲ್ಕ ಪಾವತಿಸುವ ಅಗತ್ಯವಿರುವುದಿಲ್ಲ" ಎಂಬ ಅಂಶವನ್ನು ಕಡ್ಡಾಯವಾಗಿ ಪೋಷಕರ ಗಮನಕ್ಕೆ ತರುವುದು.
6. ಶುಲ್ಕ ಪಾವತಿಗೆ ಸಂಬಂಧಿಸಿದಂತೆ ಯಾವುದೇ ದೂರುಗಳು ಬಂದಲ್ಲಿ ಜಿಲ್ಲಾ ಉಪನಿರ್ದೇಶಕರುಗಳು ತಮ್ಮ ಹಂತದಲ್ಲಿಯೇ ಪರಿಶೀಲನಾ ತಂಡವನ್ನು ರಚಿಸಿ, ದೂರು ದಾಖಲಾದ ಶಾಲೆಗೆ ತಕ್ಷಣವೇ ಭೇಟಿ ನೀಡಿ, ಕೂಲಂಕಷವಾಗಿ ಪರಿಶೀಲನೆ ಮಾಡಿ ಕ್ರಮ ಕೈಗೊಳ್ಳಲು ಸೂಚಿಸಿದೆ.

ಈ ಸುತ್ತೋಲೆಯನ್ನು ಇಮೇಲ್ / ವಾಟ್ಸ್‌ಪ್ ಹಾಗೂ ಇತರೇ ಎಲೆಕ್ಟ್ರಾನಿಕ್ ಮಾಧ್ಯಮದ ಮೂಲಕ ಎಲ್ಲಾ ಖಾಸಗಿ ಶಾಲೆಗಳ ಆಡಳಿತ ಮಂಡಳಿಗಳಿಗೆ / ಶಾಲಾ ಮುಖ್ಯ ಶಿಕ್ಷಕರಿಗೆ ತಲುಪಿಸಲು ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ರವರು ಅಗತ್ಯ ಕ್ರಮ ಕೈಗೊಳ್ಳುವುದು.

24/4/20

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ.

ಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ
(ಜಿಲ್ಲಾ ಉಪನಿರ್ದೇಶಕರ ಮುಖಾಂತರ)
3. ರಾಜ್ಯದ ಎಲ್ಲಾ ಖಾಸಗಿ ಅನುದಾನರಹಿತ ಶಾಲೆಗಳ ಮುಖ್ಯೋಪಾಧ್ಯಾಯರಿಗೆ ಸೂಕ್ತ ಕ್ರಮಕ್ಕಾಗಿ
(ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ)

ಪ್ರತಿಯನ್ನು

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ, ಸನ್ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ರವರ ಮಾಹಿತಿಗಾಗಿ.